ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1096
ಮಾನ್ಯ ಸದಸ್ಯರ ಹೆಸರು	:	ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
ವಿಷಯ	:	ರಾಯಚೂರು ನಗರದಲ್ಲಿರುವ ಪ್ರಾಚೀನ ಕೋಟೆ ಅಭಿವೃದ್ಧಿ ಮಾಡುವ ಬಗ್ಗೆ
ಉತ್ತರಿಸುವ ದಿನಾಂಕ	:	13.03.2020
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಯಚೂರು ನಗರದಲ್ಲಿರುವ ಪ್ರಾಚೀನ ಕೋಟೆ ಅಭಿವೃದ್ಧಿಗೆ ಸರ್ಕಾರ ಮಂಜೂರು ಮಾಡಿರುವ ಅನುದಾನ ಎಷ್ಟು; ಅನುದಾನ ಮಂಜೂರಾಗಿದ್ದರೂ ಇಲ್ಲಿಯವರೆಗೂ ಕೋಟೆ ಅಭಿವೃದ್ಧಿಯ ಕೆಲಸ ಪ್ರಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ನಗರದಲ್ಲಿರುವ ಪುರಾತನ ಕೋಟೆಯನ್ನು ಪುನಶ್ಚೇತನಗೊಳಿಸಲು ರೂ.450.00 ಲಕ್ಷಗಳನ್ನು ಮಂಜೂರು ಮಾಡಲಾಗಿದೆ. ಕೋಟೆಯನ್ನು ಪುನಶ್ಚೇತಗೊಳಿಸುವ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲು ಅನುಮೋದನೆ ನೀಡಿ, ಮೊದಲ ಕಂತಾಗಿ ರೂ.100.00 ಲಕ್ಷಗಳನ್ನು ಕಾರ್ಯನಿರ್ವಾಹಕ ಇಂಜೀನಿಯರ್, ಲೋಕೋಪಯೋಗಿ ಇಲಾಖೆ, ರಾಯಚೂರು ಇವರಿಗೆ ಮತ್ತು ಎರಡನೇ ಕಂತಾಗಿ ರೂ.100.00ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ರಾಯಚೂರು ಇವರಿಗೆ ಬಿಡುಗಡೆ ಮಾಡಲಾಗಿದೆ. ಲೋಕೋಪಯೋಗಿ ಇಲಾಖೆ ಟೆಂಡರ್ ಆಹ್ವಾನಿಸಿ, ಸದರಿ ಟೆಂಡರ್‌ನಲ್ಲಿ ಆಯ್ಕೆಯಾದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಹಿಸಿರುತ್ತದೆ. ಆದರೆ, ಕಾಮಗಾರಿಯು ಸಂರಕ್ಷಣೆ ಸ್ವರೂಪದ್ದಾಗಿರುವುದರಿಂದ ಕಾಮಗಾರಿಯನ್ನು ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ಇವರ ಮೂಲಕ ಕೈಗೊಳ್ಳಲು ಪರಿಷ್ಕೃತ ಅನುಮೋದನೆ ನೀಡಲಾಗಿದೆ. ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ರವರು ಸಲ್ಲಿಸಿರುವ ರೂ.450.00ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಪರಿಶೀಲಿಸಲಾಗುತ್ತಿದೆ.
ಆ)	ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣದಲ್ಲಿರುವ ಪ್ರಾಚೀನ ಕೋಟೆ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಮಂಜೂರಾಗಿರುವ ಅನುದಾನ ಎಷ್ಟು?	ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಕಡತ ಸಂಖ್ಯೆ: ಟಿಓಆರ್ 56 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು